# ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ

(ಹದಿನಾರನೇ ಅಧಿವೇಶನ)

## ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 06ನೇ ಫೆಬ್ರವರಿ, 2013

(ಸಮಯ: ಬೆಳಿಗ್ಗೆ 11.00 ಗಂಟೆಗೆ)

– – –

### 1. ಪ್ರಶ್ನೋತ್ತರ

**ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ**

**ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ**

### 2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಸದಸ್ಯರಿಗೆ ಈಗಾಗಲೇ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೊದಲನೇ ಮತ್ತು ಎರಡನೇ ಪಟ್ಟಿಯ ರೀತ್ಯಾ)

### 3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಸಿದ್ದರಾಮಯ್ಯ, ಟಿ.ಬಿ.ಜಯಚಂದ್ರ, ಹೆಚ್.ಡಿ.ರೇವಣ್ಣ, ಬಂಡೆಪ್ಪ ಕಾಶೆಂಪುರ್ ಹಾಗೂ ಇತರರು ರಾಜ್ಯದಲ್ಲಿ ತೀವ್ರ ಬರಗಾಲ ಪರಿಸ್ಥಿತಿ ಉಂಟಾಗಿದ್ದು, ಕುಡಿಯುವ ನೀರಿನ ಅಭಾವದಿಂದಾಗಿ ಉಂಟಾಗಿರುವ ಸಮಸ್ಯೆಗಳ ಕುರಿತು ನೀಡಿರುವ ವಿಚಾರದಲ್ಲಿ ಸೂಚನೆಯ ಬಗ್ಗೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

### 4. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2013ರ ಫೆಬ್ರವರಿ 4ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ"ಎಂದು ಶ್ರೀ ವೀರಣ್ಣ ಚರಂತಿಮಠ ಅವರು ದಿನಾಂಕ: 2013ರ ಫೆಬ್ರವರಿ 4ರಂದು ಸೂಚಿಸಿದ ಪ್ರಸ್ತಾಪದ ಮೇಲೆ ಚರ್ಚೆ.

ಪು.ತಿ.ನೋ

## 5. ಗಮನ ಸೆಳೆಯುವ ಸೂಚನೆಗಳು

1. ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ, ಬಂಡೆಪ್ಪ ಕಾಶೆಂಪುರ, ಹೆಚ್.ಸಿ. ಬಾಲಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಸಿ.ಎಸ್. ಪುಟ್ಟರಾಜು, ಹೆಚ್. ಎಸ್. ಪ್ರಕಾಶ, ವೆಂಕಟರಾವ್ ನಾಡಗೌಡ ಮತ್ತು ಸುನೀಲ್ ವಿ. ಹೆಗಡೆ ಅವರುಗಳು ಹಾಸನ ಜಿಲ್ಲೆಯ ಹೇಮಾವತಿ ಕೊಳ್ಳ ಪ್ರದೇಶದ ಕಾಮಗಾರಿಗಳಿಗೆ ಹೆಚ್ಚಿನ ಅನುದಾನ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2. ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ, ಬಂಡೆಪ್ಪ ಕಾಶೆಂಪುರ, ಹೆಚ್.ಸಿ. ಬಾಲಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಸಿ.ಎಸ್. ಪುಟ್ಟರಾಜು, ಹೆಚ್. ಎಸ್. ಪ್ರಕಾಶ, ವೆಂಕಟರಾವ್ ನಾಡಗೌಡ ಮತ್ತು ಸುನೀಲ್ ವಿ. ಹೆಗಡೆ ಅವರುಗಳು ಪ್ರಸ್ತುತ ಸಾಲಿನಲ್ಲಿ ನಷ್ಟ ಅನುಭವಿಸುತ್ತಿರುವ ಆಲೂಗೆಡ್ಡೆ ಬೆಳೆಗಾರರಿಗೆ ಪ್ರತಿ ಎಕರೆಗೆ ನೇರವಾಗಿ ಐದು ಸಾವಿರ ರೂ.ಗಳನ್ನು ನಗದು ರೂಪದಲ್ಲಿ ನೀಡುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

3. ಶ್ರೀ ಟಿ.ಬಿ. ಜಯಚಂದ್ರ ಅವರು ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಕಳಂಬೆಳ್ಳ ಕೆರೆಯಿಂದ ಕುಡಿಯುವ ನೀರು ಸರಬರಾಜು ಮಾಡುವ ಎನ್.ಆರ್.ಡಬ್ಲ್ಯೂ.ಎಸ್.ಬಿ ಯೋಜನೆಯಡಿ ಸ್ವಾಧೀನಪಡಿಸಿಕೊಂಡ ರೈತರ ಜಮೀನಿಗೆ ಪರಿಹಾರ ಧನ ನಿಗದಿ ಮಾಡದಿರುವುದರಿಂದ ರೈತರಿಗೆ ಉಂಟಾಗುತ್ತಿರುವ ತೊಂದರೆ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿ (ಕಂದಾಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್) ಯವರ ಗಮನ ಸೆಳೆಯುವುದು.

4. ಶ್ರೀ ಬಂಡೆಪ್ಪ ಕಾಶೆಂಪೂರ್ ಅವರು ಬೀದರ್ ತಾಲ್ಲೂಕಿನ ಗ್ವಾರನಹಳ್ಳಿ ಗ್ರಾಮದಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಯ ಹಾಗೂ ಗ್ರಾಮಸ್ತರ ವಿರೋಧವಿದ್ದರೂ ಸಹ ಎಸ್.ಟಿ.ಪಿಯನ್ನು (ಸಿವರೇಜ್ ಟ್ರೀಟ್‌ಮೆಂಟ್ ಪ್ಲಾಂಟ್) ಪ್ರಾರಂಭ ಮಾಡುತ್ತಿರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕರ ಉದ್ದಿಮೆಗಳ ಸಚಿವರ ಗಮನ ಸೆಳೆಯುವುದು.

5. ಡಾ॥ ಸಾರ್ವಭೌಮ ಬಗಲಿ ಅವರು ಬಿಜಾಪುರ ಜಿಲ್ಲೆಯ ಇಂಡಿ ಕ್ಷೇತ್ರದ ಅಂಜಟಗಿಯಲ್ಲಿ ನಿರ್ಮಾಣ ಹಂತದಲ್ಲಿರುವ ಕಿತ್ತೂರು ಚೆನ್ನಮ್ಮ ವಸತಿ ಶಾಲೆ ಕಟ್ಟಡ ಕಾಮಗಾರಿಯು ಅತ್ಯಂತ ವಿಳಂಬವಾಗುತ್ತಿರುವ ಮತ್ತು ಕಳಪೆ ಮಟ್ಟದ್ದಾಗಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

6. ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು ಹೊನ್ನಾವಳ್ಳಿ ಏತ ನೀರಾವರಿ ಯೋಜನೆಯ ಮೂಲಕ ಹೊಸದುರ್ಗ ತಾಲ್ಲೂಕಿನ ಬಲ್ಲಾಳ ಸಮುದ್ರ ಕೆರೆಗೆ ನೀರನ್ನು ಹರಿಸುವ ಬಗ್ಗೆ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

7. ಶ್ರೀ ವೆಂಕಟರಾವ್ ನಾಡಗೌಡ ಅವರು ಸಿಂಧನೂರು ನಗರದಲ್ಲಿ ಕೊಳಚೆ ನಿರ್ಮೂಲನಾ ಮಂಡಳಿಯವರು ಐ.ಹೆಚ್.ಎಸ್.ಡಿ.ಪಿ. ಯೋಜನೆಯಡಿ ನಿರ್ಮಾಣ ಮಾಡುತ್ತಿರುವ ಮನೆಗಳ ಕಾಮಗಾರಿಯು ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

8. ಶ್ರೀ ಕಿಮ್ಮನೆ ರತ್ನಾಕರ್ ಅವರು ತೀರ್ಥಹಳ್ಳಿ ತಾಲ್ಲೂಕಿನಲ್ಲಿ ಬಗರ್‌ಹುಕುಂ ಸಮಿತಿಗಳು ಮಂಜೂರು ಮಾಡಿರುವ ಅರ್ಜಿಗಳ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ (ಕಂದಾಯ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ) ಗಮನ ಸೆಳೆಯುವುದು.

## 6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಶ್ರೀಕಾಂತ ಕುಲಕರ್ಣಿ, ಡಾ॥ ಸಾರ್ವಭೌಮ ಬಗಲಿ ಮತ್ತು ಶಿವರಾಜ್ ಎಸ್. ತಂಗಡಗಿ ಇವರುಗಳು ಮಹಾರಾಷ್ಟ್ರ ರಾಜ್ಯದಿಂದ ಕೃಷ್ಣ ಹಾಗೂ ಭೀಮಾ ನದಿಗಳಿಗೆ ನೀರನ್ನು ಬಿಡಿಸುವ ಕುರಿತು ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಡಾ॥ ಸೌರ್ವಭೌಮ ಬಗಲಿ, ಎನ್. ಸಂಪಂಗಿ, ಶಿವರಾಜ್ ತಂಗಡಗಿ, ಗೂಳಿಹಟ್ಟಿ ಶೇಖರ್ ಹಾಗೂ ಇತರರು ರಾಜ್ಯದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯ ಕೊರತೆ ಮತ್ತು ಅಪೌಷ್ಟಿಕ ಆಹಾರ ಪೂರೈಕೆ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

**ಪಿ.ಓಂಪ್ರಕಾಶ**
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)